

ಅರುಣ ಪಿ. ಭಟ್ಟ

## 21.05.2020ರಿಂದ 27.05.2020ರವರೆಗೆ




ನಿಮ್ಮ ವಿಶ್ವಾಸ ಬೆಳೆಯುತ್ತದೆ ಮತ್ತು ಪ್ರಗತಿ ನಿಶ್ಚಿತವಾಗಿದೆ. ವೆಚ್ಚ ಏರಿದರೂ ಆದಾಯದಲ್ಲಿನ ಹೆಚ್ಚಳ ಖರ್ಚುಗಳನ್ನು ಸರಿದೂಗಿಸುತ್ತದೆ. ನಿಮ್ಮ ಅಭಿಪ್ರಾಯಗಳನ್ನು ಇತರರ ಮೇಲೆ ಹೇರಬೇಡಿ. ನಿಮ್ಮ ಮನೆಯಲ್ಲಿ ಸಾಮರಸ್ಯ ತರಲು ನಿಕಟ ಸಹಕಾರದೊಂದಿಗೆ ಕೆಲಸ ಮಾಡಬೇಕು. ವಿರೋಧಿಗಳಿಂದ ದೂರವಿರಲು ಪ್ರಯತ್ನಿಸಿ. ಶುಭದಿನ 21. ಶ್ರೀ ದುರ್ಗಾ ಆರಾಧನೆ ಮಾಡಿರಿ.




ವಾರದ ಶುರುವಿನಿಂದಲೇ ವೃತ್ತಿಪರ ಜೀವನದಲ್ಲಿ ಉತ್ತಮ ಅವಕಾಶಗಳು ದೊರೆಯಲಿವೆ. ಅದರ ಫಲಿತವಾಗಿ ಸರಿಯಾದ ಸಮಯಕ್ಕೆ ಕೆಲಸ ಕಾರ್ಯಗಳು ಪೂರ್ಣಗೊಳ್ಳಲಿವೆ. ಮಕ್ಕಳಿಗೆ ಸಹಾಯ ಮಾಡಲಿದ್ದೀರಿ. ಕುಟುಂಬದಲ್ಲಿ ಹಲವು ಬದಲಾವಣೆ ತರುವ ಮೂಲಕ ಸಂತೋಷ ಉಂಟು ಮಾಡಲಿದ್ದೀರಿ. ಇಲ್ಲದಿದ್ದರೆ ಸಮಸ್ಯೆಗಳನ್ನು ಎದುರಿಸಬೇಕಾಗುತ್ತದೆ. ಶುಭದಿನ 25. ಹನುಮಾನ್ ಚಾಲೀಸ್ ಓದಿರಿ.




ದಾನ ಧರ್ಮ ಕಾರ್ಯಗಳಲ್ಲಿ ಆಸಕ್ತಿ ಮೂಡುತ್ತದೆ. ಅದಕ್ಕೆ ನಿಮ್ಮ ಕುಟುಂಬದ ಬೆಂಬಲವೂ ದೊರೆಯುತ್ತದೆ. ನಿಮ್ಮ ತಾಯಿಯವರ ಅನಾರೋಗ್ಯ ಆತಂಕಕ್ಕೆ ಗುರಿ ಮಾಡಬಹುದು. ಆದಾಯ ಮೂಲಗಳಿಂದ ಉತ್ತಮ ವರಮಾನ ಇರುತ್ತದೆ. ಇದರಿಂದ ನಿಮ್ಮ ಆತ್ಮವಿಶ್ವಾಸ ಹೆಚ್ಚಾಗುತ್ತದೆ ಸಂತೋಷ ಕೂಡ ಉಂಟಾಗುತ್ತದೆ. ಶುಭದಿನ 27. ಗಣಪತಿಗೆ 108 ದೂರ್ವಾರ್ಚನೆ ಮಾಡಿರಿ.




ನಿಮ್ಮ ಸಾಮರ್ಥ್ಯವನ್ನು ಸರಿಯಾದ ದಿಕ್ಕಿನಲ್ಲಿ ಬಳಕೆ ಮಾಡಿಕೊಳ್ಳುತ್ತೀರಿ. ಇದರಿಂದ ಮುಂಬರುವ ದಿನಗಳಲ್ಲಿ ಅನುಕೂಲ ಆಗುತ್ತದೆ. ಆರೋಗ್ಯದಲ್ಲಿ ಏರುಪೇರಾಗುವ ಸಾಧ್ಯತೆಗಳಿವೆ. ಕುಟುಂಬದ ಸದಸ್ಯರ ಜತೆಗೆ ಉತ್ತಮ ಬಾಂಧವ್ಯ ಇರುತ್ತದೆ. ಒಡಹುಟ್ಟಿದವರ ಜತೆಗೆ ಅತಿ ಮುಖ್ಯವಾದ ವಿಚಾರಗಳನ್ನು ಚರ್ಚೆ ಮಾಡುತ್ತೀರಿ. ಕೆಲಸದಲ್ಲಿ ಪ್ರಗತಿ ಇದೆ. ಶುಭದಿನ 21. ವಿಷ್ಣು ಸಹಸ್ರನಾಮ ಓದಿರಿ.




ವಾರದ ಮೊದಲ ಭಾಗದಲ್ಲಿ ದೂರದ ಪ್ರದೇಶಗಳಿಗೆ ತೆರಳುವ ಸಂಭವ. ಭೂಮಿಗೆ ಸಂಬಂಧಿಸಿದ ವ್ಯಾಜ್ಯಗಳು ಕೋರ್ಟ್‌ನಲ್ಲಿ ಇದ್ದರೆ ಅವುಗಳನ್ನು ನಿವಾರಿಸಿಕೊಳ್ಳುವ ನಿಟ್ಟಿನಲ್ಲಿ ಹೆಚ್ಚು ಶ್ರಮ ಪಡಬೇಕಾಗುತ್ತದೆ. ವಾರದ ಅಂತ್ಯಕ್ಕೆ ಸರಿಯುತ್ತಾ ಧಾರ್ಮಿಕ ಕ್ಷೇತ್ರಗಳಿಗೆ ಭೇಟಿ ನೀಡುವ ಆಲೋಚನೆ ಮಾಡುತ್ತೀರಿ. ಆರೋಗ್ಯದಲ್ಲಿ ಸ್ವಲ್ಪ ಏರುಪೇರು ಆಗಬಹುದು. ಶುಭದಿನ 23 ಕಾಲಭೈರವನ ಸೇವೆ ಮಾಡಿರಿ.




ನಿಮ್ಮ ಸಂಬಂಧಿಕರ ಭೇಟಿ ಮಾಡುವ ಸಾಧ್ಯತೆ ಇದೆ. ಕೆಲ ಮುಖ್ಯವಾದ ವಿಚಾರಗಳನ್ನು ಅವರ ಜತೆ ಚರ್ಚೆ ಮಾಡಲಿದ್ದೀರಿ. ಹೆಚ್ಚಿನ ಖರ್ಚು ಆಗಲಿದೆ. ಉದ್ಯೋಗದಲ್ಲಿ ಒತ್ತಡ ಹೆಚ್ಚಾಗುವ ಸಾಧ್ಯತೆಯಿದೆ. ತಲೆ ನೋವು, ಕಿವಿ ನೋವು ಅಥವಾ ಹಲ್ಲು ನೋವಿನಂಥ ಸಮಸ್ಯೆಗಳು ಕಾಡಬಹುದು. ಹಲವು ಅವಕಾಶಗಳು ದೊರೆಯಲಿವೆ. ಶುಭದಿನ 22. ದೇವ್ಯಪರಾಧ ಕ್ಷಮಾಪನಾ ಸ್ತೋತ್ರ 18 ಸಾರೆ ಪಠಣ ಮಾಡಿರಿ.




ವೃತ್ತಿಪರ ಜೀವನದಲ್ಲಿ ಉತ್ತಮವಾದ ಅವಕಾಶಗಳು ದೊರೆಯಲಿವೆ. ಕೌಟುಂಬಿಕ ವಿಷಯಗಳಲ್ಲಿ ಪ್ರಗತಿ ಕಾಣಲಿದೆ. ವ್ಯಾಪಾರ ವ್ಯವಹಾರಗಳಲ್ಲಿ ಪ್ರಗತಿ ಕಾಣಿಸುತ್ತದೆ. ನಿಮ್ಮ ಆರೋಗ್ಯ ಕೂಡ ಉತ್ತಮವಾಗಿರುತ್ತದೆ. ಮಕ್ಕಳ ಪ್ರಗತಿ ನಿಧಾನ ಆಗುವುದರಿಂದ ಚಿಂತೆಗೆ ಕಾರಣವಾಗುತ್ತದೆ. ಹೆಚ್ಚಿನ ಶ್ರಮ ಹಾಕಬೇಕಾಗುತ್ತದೆ. ಶುಭದಿನ 24. ದಕ್ಷಿಣಾಮೂರ್ತಿ ಸ್ತೋತ್ರ ಪಠಣ ಮಾಡಿರಿ.




ಉದ್ಯೋಗಸ್ಥರು ನಿಮಗೆ ವಹಿಸಿದ ಕೆಲಸಗಳನ್ನು ಪೂರೈಸಲು ಯಶಸ್ವಿ ಆಗುತ್ತೀರಿ. ವ್ಯಾಪಾರ ವ್ಯವಹಾರ ಪ್ರಗತಿಗೆನಿಮ್ಮ ಶ್ರಮದ ಸಹಾಯ ಆಗುತ್ತದೆ. ನಿಮ್ಮ ಸಿಬ್ಬಂದಿಯ ಆತ್ಮಸ್ಥೈರ್ಯ ಹೆಚ್ಚಿಸುವಲ್ಲಿ ಸಫಲರಾಗುತ್ತೀರಿ. ಪ್ರೋತ್ಸಾಹ ನೀಡುತ್ತೀರಿ. ಸ್ಪರ್ಧಾತ್ಮಕ ಕ್ಷೇತ್ರದಲ್ಲಿ ನೀಡಿದ ಸಂದರ್ಶನಗಳು ಯಶಸ್ಸು ಕಾಣುವ ಸಾಧ್ಯತೆಗಳಿವೆ. ಶುಭದಿನ 23. ಲಕ್ಷ್ಮೀ ನಾರಾಯಣ ಹೃದಯ ಪಾರಾಯಣ ಮಾಡಿರಿ.




ಹಣಕಾಸು ಹೂಡಿಕೆಯಲ್ಲಿ ಪ್ರಗತಿ ಕಾಣಲಿದ್ದೀರಿ. ಬಾಹ್ಯ ಚಟುವಟಿಕೆಗಳು ಈ ಹಿಂದಿನಂತೆಯೇ ನಡೆಯುತ್ತವೆ. ತಲೆನೋವು, ಕಣ್ಣಿಗೆ ಸಂಬಂಧಿಸಿದ ತೊಂದರೆ ಹಾಗೂ ಹಲ್ಲು ನೋವು ಕಾಡಬಹುದು. ಈ ಸಮಸ್ಯೆಗಳಿಗೆ ಆಸ್ಪತ್ರೆಗೆ ಹೋಗುವುದು ಅನಿವಾರ್ಯ ಆಗುತ್ತದೆ ತಾಳ್ಮೆ ಹಾಗೂ ವಿವೇಚನೆ ಬಹಳ ಮುಖ್ಯವಾಗುತ್ತದೆ. ಶುಭದಿನ 27. ಈಶ್ವರನಿಗೆ ರುದ್ರಾಭಿಶೇಕ ಮಾಡಿಸಿ.




ವಾರದ ಶುರುವಿನಿಂದಲೇ ನಿಮ್ಮ ಅದೃಷ್ಟ ಚೆನ್ನಾಗಿದೆ. ನಿಮ್ಮ ಕೆಲಸಗಳನ್ನು ಪೂರ್ಣಗೊಳಿಸುವ ನಿಟ್ಟಿನಲ್ಲಿ ಹಿಂದೆಂದಿಗಿಂತಲೂ ಹೆಚ್ಚು ಚಟುವಟಿಕೆಯಿಂದ ಕಾಣಿಸಿಕೊಳ್ಳುತ್ತಿರಿ. ಕಟ್ಟಡ ವಾಹನಗಳ ನಿರ್ವಹಣೆಯು ನಿರಂತರ ಚಿಂತೆಗೆ ಕಾರಣವಾಗುತ್ತದೆ. ಆರೋಗ್ಯ ಸಮಸ್ಯೆ ಕಾಣಿಸಿಕೊಳ್ಳಬಹುದು. ವಾರಾಂತ್ಯಕ್ಕೆ ಹಣದ ಹರಿವು ಹೆಚ್ಚಾಗಲಿದೆ. ಶುಭದಿನ 22. ಮಾರುತಿ ಗುಡಿಗೆ ಮುಖ ನೋಡಿದ ಎಣ್ಣೆ ನೀಡಿರಿ.




ವ್ಯಾಪಾರ ವ್ಯವಹಾರ ಮಾಡುತ್ತಿರುವವರು ಅದನ್ನು ಮುಂದಿನ ಹಂತಕ್ಕೆ ತೆಗೆದುಕೊಂಡು ಹೋಗಲು ಯತ್ನಿಸುತ್ತೀರಿ. ನಿಮ್ಮ ಶ್ರಮಕ್ಕೆ ಯಶಸ್ಸು ದೊರೆಯುತ್ತದೆ. ನಿಮ್ಮ ಆರೋಗ್ಯ ಚೆನ್ನಾಗಿರುತ್ತದೆ. ವೈವಾಹಿಕ ಜೀವನವು ಸಂತೋಷವಾಗಿ ಇರುತ್ತದೆ.ಮನಸಿಗೆ ಸಂತೋಷ ನೀಡುವಂಥ ಗೃಹಾಲಂಕಾರ ವಸ್ತುಗಳ ಖರೀದಿಗೆ ಮುಂದಾಗುತ್ತೀರಿ. ಶುಭದಿನ 23. ಸುಬ್ರಹ್ಮಣ್ಯ ಜಪ ಮಾಡಿರಿ.




ನಿಮ್ಮ ಕೆಲಸ ಕಾರ್ಯಗಳನ್ನು ಇನ್ನಷ್ಟು ಒಪ್ಪ ಓರಣವಾಗಿ ಮಾಡಲು ಇನ್ನೂ ಹೆಚ್ಚಿನ ಶ್ರಮ ಹಾಕುತ್ತೀರಿ. ನಿಮ್ಮ ಮೇಲಾಧಿಕಾರಿಗಳು ಸೂಚನೆ ನೀಡಿ, ಕೆಲಸದ ವೇಗವನ್ನು ಮತ್ತಷ್ಟು ಹೆಚ್ಚಿಸಿಕೊಳ್ಳುವಂತೆ ಸೂಚನೆ ನೀಡುತ್ತಾರೆ. ಕೆಲವು ವ್ಯವಹಾರಗಳನ್ನು ಮಾಡುವಾಗ ಬಹಳ ಎಚ್ಚರಿಕೆಯಿಂದ ಇರಬೇಕಾಗುತ್ತದೆ. ಮನೆಯಲ್ಲಿ ಸಂಭ್ರಮದ ವಾತಾವರಣ ಇರುತ್ತದೆ. ಶುಭದಿನ 21. ನವದುರ್ಗಾ ಆರಾಧನೆ ಮಾಡಿರಿ.